I/414671/2023

**ಕರ್ನಾಟಕ ಸರ್ಕಾರ**
**GOVERNMENT OF KARNATAKA**

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು) ರವರ ಕಛೇರಿ
Office of the
Principal Chief Conservator of Forests
(Head of Forest Force)

ಅರಣ್ಯ ಭವನ, 18ನೇ ಅಡ್ಡ ರಸ್ತೆ
ಮಲ್ಲೇಶ್ವರಂ, ಬೆಂಗಳೂರು-560003
Aranya Bhavan, 18th Cross
Malleshwaram, Bengaluru- 03
Telephone: 080 23367123
Email:apccfpr@gmail.com

E-office No.:KFD/HOFF/B4(EST)/71/2022-PnR-KFD **E-975367**

Date: 06-04-2023

## ಅಧಿಕೃತ ಜ್ಞಾಪನ

**ವಿಷಯ :** ದಿನಾಂಕ: 01-01-2020 ರಿಂದ 09-12-2021 ರವರೆಗೆ ಉಳಿಕೆ ಮೂಲ ವೃಂದದ (Residual Parent Cadre)-Non-HK ಬೆರಳಚ್ಚುಗಾರರ (Typist) ವೃಂದದ ರಾಜ್ಯ ಮಟ್ಟದ ಅಂತಿಮ ಜ್ಯೇಷ್ಟತಾ ಪಟ್ಟಿ (Final Seniority List) ಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ**

1. ಈ ಕಛೇರಿಯ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಬಿ4/ಸಿಬ್ಬಂದಿ/ಸಿಆರ್-29/2020-21, ದಿನಾಂಕ:15-02-2021.
2. ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಟತೆ) ನಿಯಮಾವಳಿ 1957ರ ನಿಯಮ-10(1).
3. ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಸಿಆಸುಇ 106 ಸೇನೆನಿ 2021, ದಿನಾಂಕ:10-12-2021.
4. ಈ ಕಛೇರಿಯ ಅಧಿಕೃತ ಜ್ಞಾಪನಾ ಪತ್ರ ಸಮ ಸಂಖ್ಯೆ ದಿನಾಂಕ: 18-01-2023 *[ಕರಡು ಜ್ಯೇಷ್ಟತಾ ಪಟ್ಟಿ].*

**ಪ್ರಸ್ತಾವನೆ :**

1. ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಟತೆ) ನಿಯಮಾವಳಿ 1957ರ ನಿಯಮ 10(1) ರನ್ವಯ ಪ್ರತಿಯೊಂದು ಸಾಲಿನಲ್ಲಿ ಪ್ರತಿಯೊಂದು ವೃಂದದಲ್ಲಿನ ಅಧಿಕಾರಿ/ಸಿಬ್ಬಂದಿಗಳ ಜ್ಯೇಷ್ಟತಾ ಪಟ್ಟಿ (Seniority List) ಯನ್ನು ತಯಾರಿಸುವುದು ಕಡ್ಡಾಯವಾಗಿರುತ್ತದೆ.

2. ಉಲ್ಲೇಖ (1)ರಲ್ಲಿನ ಈ ಕಛೇರಿಯ ಅಧಿಕೃತ ಜ್ಞಾಪನ ಪತ್ರದಲ್ಲಿ ಉಳಿಕೆ ಮೂಲ ವೃಂದದ (Residual Parent Cadre)-Non-HK ಬೆರಳಚ್ಚುಗಾರರ (Typist) ವೃಂದದ ದಿನಾಂಕ: 27-04-1978 ರಿಂದ 31-12-2019 ರವರೆಗೆ ಜ್ಯೇಷ್ಟತಾ ನಿಯಮಗಳನ್ವಯ ಜ್ಯೇಷ್ಟತಾ ಪಟ್ಟಿ (Seniority List)ಯನ್ನು ಅಂತಿಮವಾಗಿ ಜ್ಯೇಷ್ಟತಾ ಕ್ರಮ ಸಂಖ್ಯೆ 1 ರಿಂದ 186 ರವರೆಗೆ ಪ್ರಕಟಿಸಲಾಗಿರುತ್ತದೆ.

3. ಈ ಮಧ್ಯೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ:10.12.2021ರಲ್ಲಿ *"ರಾಜ್ಯ ಸಿವಿಲ್ ಸೇವೆಗಳಲ್ಲಿನ ಯಾವುದೇ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಸಂಬಂಧಿಸಿದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ಅನುಪಾತ/ಪ್ರತಿಶತ ಪ್ರಮಾಣವನ್ನು ನಿಗದಿಪಡಿಸಿದ್ದಲ್ಲಿ, ನಿಗದಿಪಡಿಸಿದ ಅನುಪಾತ/ಪ್ರತಿಶತದನ್ವಯ ಹುದ್ದೆ ಆಧಾರಿತವಾಗಿ ನೇರ ನೇಮಕಾತಿಗೆ ಮತ್ತು ಮುಂಬಡ್ತಿಗಳಿಗೆ ಒಟ್ಟು ಹುದ್ದೆಗಳನ್ನು ವರ್ಗೀಕರಣ ಮಾಡತಕ್ಕದ್ದು. ಈ ಉದ್ದೇಶಕ್ಕಾಗಿ ಆ ವೃಂದದಲ್ಲಿನ ಶಾಶ್ವತ ಹುದ್ದೆಗಳ ಜೊತೆಗೆ ತಾತ್ಕಾಲಿಕ ಹುದ್ದೆಗಳು ಸಹ ಒಳಗೊಂಡಿರುತ್ತವೆ. ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ಹುದ್ದೆಗಳನ್ನು ಮೇಲ್ಕಂಡಂತೆ ವರ್ಗೀಕರಿಸಿದ ನಂತರ ನೇರ ನೇಮಕಾತಿಗಾಗಿ ವರ್ಗೀಕರಿಸಿದ ಹುದ್ದೆಗಳನ್ನು ನೇರ ನೇಮಕಾತಿಯಿಂದಲೇ ಮತ್ತು ಮುಂಬಡ್ತಿಗಾಗಿ ವರ್ಗೀಕರಿಸಿದ ಹುದ್ದೆಗಳನ್ನು ಮುಂಬಡ್ತಿಯಿಂದಲೇ ಭರ್ತಿ ಮಾಡತಕ್ಕದ್ದು"* ಎಂದು ತಿಳಿಸಲಾಗಿದೆ. ಮುಂದುವರೆದು, ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: DPAR 48 SSR 75 ದಿನಾಂಕ:05.07.1976ರಲ್ಲಿ ಬ್ಲಾಕ್ ಅವಧಿಯನ್ನು ವಿಂಗಡಿಸುವ ಕುರಿತು ಮಾರ್ಗಸೂಚಿಗಳನ್ನು ನಿಗದಿಪಡಿಸಿದ್ದು, ಈ ಅಧಿಕೃತ ಜ್ಞಾಪನದ ಕಂಡಿಕೆ 3(c) ರಂತೆ ನೇರ ನೇಮಕಾತಿ ಮತ್ತು ಬಡ್ತಿಯ ನಡುವೆ ಅನುಪಾತವು ದಿನಾಂಕ:10.12.2021ರ ಆದೇಶದಂತೆ ಬದಲಾವಣೆಗೊಂಡಿದ್ದರಿಂದ

ದಿನಾಂಕ:01.01.2020 ರಿಂದ ಆರಂಭವಾಗುವ ಬ್ಲಾಕ್ ಅವಧಿಯನ್ನು ದಿನಾಂಕ:09.12.2021ಕ್ಕೆ ಮುಕ್ತಾಯಗೊಳಿಸಬೇಕಾಗಿರುತ್ತದೆ.

4. ಉಲ್ಲೇಖ(4) ರಲ್ಲಿ ದಿನಾಂಕ: 01-01-2020 ರಿಂದ 09-12-2021 ರವರೆಗೆ ಉಳಿಕೆ ಮೂಲ ವೃಂದದ (Residual Parent Cadre)-Non-HK ಬೆರಳಚ್ಚುಗಾರರ (Typist) ವೃಂದದ ರಾಜ್ಯ ಮಟ್ಟದ ಕರಡು ಜ್ಯೇಷ್ಠತಾ ಪಟ್ಟಿ(Draft Seniority List)ಯನ್ನು ಪ್ರಕಟಿಸಿ, ಸದರಿ ಕರಡು ಜ್ಯೇಷ್ಠತಾ ಪಟ್ಟಿಯ ಕುರಿತು ಆಕ್ಷೇಪಣೆಗಳನ್ನು ಪ್ರಕಟಣೆ ದಿನಾಂಕದಿಂದ 21 ದಿನಗಳೊಳಗಾಗಿ ಈ ಕಛೇರಿಯ ಸಂಬಂಧಿಸಿದ ಶಾಖೆಯ ಇ-ಮೇಲ್ ವಿಳಾಸ b4sec.pccf@gmail.com ರ ಮೂಲಕ ಸಲ್ಲಿಸಲು ಕಾಲಾವಕಾಶವನ್ನು ನೀಡಲಾಗಿತ್ತು. ಆದರೆ ಈ ಕರಡು ಜ್ಯೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ, ಯಾವುದೇ ಆಕ್ಷೇಪಣೆಗಳು ಈ ಕಛೇರಿಗೆ ಸ್ವೀಕೃತವಾಗಿರುವುದಿಲ್ಲ.

5. ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957ರ ನಿಯಮ 10(1)ರ ಅನ್ವಯ ಹಾಗೂ ಸರ್ಕಾರಿ ಆದೇಶಗಳು/ಸುತ್ತೋಲೆಗಳನ್ನು ಅನುಸರಿಸಿ ದಿನಾಂಕ:01-01-2020 ರಿಂದ 09-12-2021ರ ವರೆಗಿನ ಅವಧಿಯಲ್ಲಿ ಉಳಿಕೆ ಮೂಲ ವೃಂದದ (Residual Parent Cadre)-Non-HK ಬೆರಳಚ್ಚುಗಾರರ (Typist) ವೃಂದದಲ್ಲಿ ಅರಣ್ಯ ಇಲಾಖೆಯಲ್ಲಿ ಯಾವುದೇ ನೇರ ನೇಮಕಾತಿ ಪ್ರಕ್ರಿಯೆಯು ನಡೆದಿರುವುದಿಲ್ಲ. ಆದಾಗ್ಯೂ ದಿನಾಂಕ:01-01-2020 ರಿಂದ 09-12-2021ರ ವರೆಗಿನ ಅವಧಿಗೆ ಸದರಿ ಅವಧಿಯಲ್ಲಿ ಉದ್ಭವವಾದ ಬೆರಳಚ್ಚುಗಾರರ (Typist) ಹುದ್ದೆಗಳ ವಿವರಗಳನ್ನು ಅನುಬಂಧ-1ರಲ್ಲಿ ಹಾಗೂ ಸದರಿ ವೃಂದದಲ್ಲಿ ನೇರ ನೇಮಕಾತಿ ಪ್ರಕ್ರಿಯೆಯು ನಡೆಯದ ಕಾರಣ ಉಳಿಕೆ ಮೂಲ ವೃಂದದ (Residual Parent Cadre)-Non-HK ಬೆರಳಚ್ಚುಗಾರರ (Typist) ಅಂತಿಮ ಜ್ಯೇಷ್ಠತಾ ಪಟ್ಟಿ(Draft Seniority List)ಯನ್ನು ಅನುಬಂಧ-2 ರಲ್ಲಿ ಶೂನ್ಯ ಮಾಹಿತಿಯೊಂದಿಗೆ ಪ್ರಕಟಿಸಲು ತೀರ್ಮಾನಿಸಿ ಈ ಕೆಳಕಂಡ ಆದೇಶ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957ರ ನಿಯಮ 10(1)ರನ್ವಯ ದಿನಾಂಕ:01-01-2020 ರಿಂದ 09-12-2021ರ ವರೆಗಿನ ಅವಧಿಗೆ ಉಳಿಕೆ ಮೂಲ ವೃಂದದ (Residual Parent Cadre)-Non-HK ಬೆರಳಚ್ಚುಗಾರರ (Typist) ಅಂತಿಮ ಜ್ಯೇಷ್ಠತಾ ಪಟ್ಟಿ(Final Seniority List)ಯನ್ನು **ಅನುಬಂಧ-1** ಮತ್ತು **ಅನುಬಂಧ-2** ರಲ್ಲಿ ಪ್ರಕಟಿಸಿ ಆದೇಶಿಸಿದೆ.

Signed by Raj Kishore Singh, Ifs
Date: 06-04-2023 15:38:37

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ, ಮುಖ್ಯಸ್ಥರು)

**ಪ್ರತಿ ಮಾಹಿತಿ /ಹಾಗೂ ಮುಂದಿನ ಕ್ರಮಕ್ಕಾಗಿ:**

1. ಎಲ್ಲಾ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
2. ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
3. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮಾಹಿತಿ ಸಂವಹನ ತಂತ್ರಜ್ಞಾನ), ಅರಣ್ಯ ಭವನ, ಬೆಂಗಳೂರು- **ಈ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.**
4. ಎಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
5. ಎಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
6. ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
7. ಎಲ್ಲಾ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
8. ಎಲ್ಲಾ ಬೆರಳಚ್ಚುಗಾರರ (Typist) ವೃಂದದ ಸಿಬ್ಬಂದಿಗಳಿಗೆ – **ಇಲಾಖಾ ವೆಬ್‌ಸೈಟ್‌ನಲ್ಲಿ ಈ ಪ್ರಕಟಣೆಯ ಮೂಲಕ.**

I/414672/2023

# ಅನುಬಂಧ -1
## ಭಾಗ-1

## ಹುದ್ದೆಗಳ ವಾಸ್ತವಿಕ ಮಾಹಿತಿ

## ದಿನಾಂಕ: 01.01.2020 ರಿಂದ 09.12.2021 ರವರೆಗಿನ ಉಳಿಕೆ ಮೂಲ ವೃಂದದ (Residual Parent Cadre)- Non-HK ಬೆರಳಚ್ಚುಗಾರರ (Typist) ರಾಜ್ಯ ಮಟ್ಟದ ಅಂತಿಮ ಜ್ಯೇಷ್ಠತಾ ಪಟ್ಟಿ (Final Seniority List)

| ಕ್ರ. ಸಂ | ವೃಂದದ ಹೆಸರು | ಬ್ಲಾಕ್ ಅವಧಿ | | ಬ್ಲಾಕ್ ಅವಧಿಯಲ್ಲಿ ಉದ್ಭವವಾದ ರಿಕ್ತ ಸ್ಥಾನಗಳು | ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಲಾದ ಕೋಟಾ | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿಗೆ ಮತ್ತು ಮುಂಬಡ್ತಿಗೆ ವರ್ಗೀಕರಿಸಲಾದ ಹುದ್ದೆಗಳ ಸಂಖ್ಯೆ | | ವಾಸ್ತವವಾಗಿ ಭರ್ತಿ ಮಾಡಲಾದ ಹುದ್ದೆಗಳ ಸಂಖ್ಯೆ | | ಹುದ್ದೆಗಳ ಅನುಪಾತ (Quota) ಮತ್ತು ಭರ್ತಿ ಮಾಡಲಾದ ಹುದ್ದೆಗಳ ನಡುವಿನ ಸಂಖ್ಯಾ ವ್ಯತ್ಯಾಸ | | | | ವಾಸ್ತವವಾಗಿ ಲಭ್ಯವಾಗುವ ಖಾಲಿ ಹುದ್ದೆಗಳ ಸಂಖ್ಯೆ | | ಷರಾ |
|---|---|---|---|---|---|---|---|---|---|---|---|---|---|---|---|---|
| | | ಇಂದ | ವರೆಗೆ | | | | | | | ಹೆಚ್ಚುವರಿ | | ಕೊರತೆ | | | | |
| | | | | | | ನೇರ | ಮುಂಬಡ್ತಿ | ನೇರ | ಮುಂಬಡ್ತಿ | ನೇರ | ಮುಂಬಡ್ತಿ | ನೇರ | ಮುಂಬಡ್ತಿ | ನೇರ | ಮುಂಬಡ್ತಿ | |
| **1** | **2** | **2A** | **2B** | **2C** | **2 D** | **3** | **4** | **5** | **6** | **7** | **8** | **9** | **10** | **11** | **12** | **13** |
| 1 | ಬೆರಳಚ್ಚುಗಾರರು (Typist) | 01.01 .2020 | 09.12 .2021 | 0 | DR:PR (1:0) | 0 | - | 0 | - | 0 | - | 0 | - | (-)75* | - | *ದಿನಾಂಕ:01-01-2020ರ ಹಿಂದಿನ ಅವಧಿಯಲ್ಲಿ ವಯೋ ನಿವೃತ್ತಿ/ ಬಡ್ತಿ/ ವೃಂದ ಬದಲಾವಣೆ/ ನಿಧನ/ ರಾಜೀನಾಮೆಯಿಂದ ಉದ್ಭವವಾದ ರಿಕ್ತ ಸ್ಥಾನಗಳು (ಮುಂದೊಯ್ದ ಹುದ್ದೆಗಳು): 75<br><br>**2020 & 2021:-** ನಿವೃತ್ತಿ/ಬಡ್ತಿ/ವೃಂದಬದಲಾವಣೆ/ ನಿಧನ/ ರಾಜೀನಾಮೆ ಯಾವುದು ಆಗಿರುವುದಿಲ್ಲ. |

**ದಿನಾಂಕ:** 06.04.2023
**ಸ್ಥಳ:** ಬೆಂಗಳೂರು

Signed by Raj Kishore
Singh, Ifs
Date: 06-04-2023 15:39:10

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)

# ಅನುಬಂಧ-2

**ದಿನಾಂಕ:01-01-2020 ರಿಂದ 09-12-2021 ರವರೆಗೆ ಉಳಿಕೆ ಮೂಲ ವೃಂದದ (Residual Parent Cadre)- Non-HK ಬೆರಳಚ್ಚುಗಾರರ (Typist) ರಾಜ್ಯ ಮಟ್ಟದ ಅಂತಿಮ ಜ್ಯೇಷ್ಠತಾ ಪಟ್ಟಿ (Final Seniority List).**

1. **ಇಲಾಖೆ :** ಕರ್ನಾಟಕ ಅರಣ್ಯ ಇಲಾಖೆ
2. **ವೃಂದದ ಹೆಸರು :** ಬೆರಳಚ್ಚುಗಾರರು (Typist)
3. **ವೃಂದದಲ್ಲಿನ ಒಟ್ಟು ಹುದ್ದೆಗಳ ಸಂಖ್ಯೆ :** 96 *[94 (State Non-HK posts)+ 2 (Non-HK posts sanctioned in HK Region)]*
4. **ನೇಮಕಾತಿ ನಿಯಮಗಳ ಅನುಸಾರ ನೇಮಕಾತಿ ವಿಧಾನ :** ನೇರ ನೇಮಕಾತಿ ವಿಧಾನ

ಈ ಕಛೇರಿಯ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಪ್ರಮುಅಸಂ (ಅಪಮು)/ಬಿ4/ ಸಿಬ್ಬಂದಿ/ ಸಿಆರ್-29/2020-2021, ದಿನಾಂಕ:15-02-2021ರಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957ರ ನಿಯಮ 10(1)ರನ್ವಯ ದಿನಾಂಕ:27-04-1978 ರಿಂದ 31-12-2019 ರವರೆಗೆ ಉಳಿಕೆ ಮೂಲ ವೃಂದದ (Residual Parent Cadre)- (Non-HK + HK) ಬೆರಳಚ್ಚುಗಾರರ (Typist) ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಜ್ಯೇಷ್ಠತಾ ಕ್ರಮ ಸಂಖ್ಯೆ:01 ರಿಂದ 186 ರವರೆಗೆ ಈಗಾಗಲೇ ಅಂತಿಮವಾಗಿ ಪ್ರಕಟಿಸಲಾಗಿರುತ್ತದೆ. ತದನಂತರ, ಸದರಿ ಜ್ಯೇಷ್ಠತಾ ಪಟ್ಟಿಯ ಕ್ರಮ ಸಂಖ್ಯೆ 107, 157, 160, 175, 179 ಮತ್ತು 182 ರಲ್ಲಿ HK ವೃಂದಕ್ಕೆ ಸೇರಿರುವ ಬೆರಳಚ್ಚುಗಾರರ (Typist) ರನ್ನು ಈ ಪಟ್ಟಿಯಿಂದ ಕೈಬಿಟ್ಟು, ಈ ಕಛೇರಿಯ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಬಿ4/ ಸಿಬ್ಬಂದಿ/ ಸಿಆರ್-97/2020-21, ದಿನಾಂಕ:17-03-2022ರಲ್ಲಿ ಕಲ್ಯಾಣ -ಕರ್ನಾಟಕ ವೃಂದಕ್ಕೆ (HK) ಸೇರಿರುವ ಬೆರಳಚ್ಚುಗಾರರ (Typist) ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

**ದಿನಾಂಕ: 01-01-2020 ರಿಂದ 09-12-2021ರ ಅವಧಿಗೆ ಉಳಿಕೆ ಮೂಲ ವೃಂದದ (Residual Parent Cadre)- Non-HK ಬೆರಳಚ್ಚುಗಾರರ (Typist) ರಾಜ್ಯ ಮಟ್ಟದ ಅಂತಿಮ ಜ್ಯೇಷ್ಠತಾ ಪಟ್ಟಿ (Final Seniority List).**

| ಕ್ರ. ಸಂ. | ಹೆಸರು | ಮೀಸಲಾತಿ ವರ್ಗ | ಜನ್ಮ ದಿನಾಂಕ | ಸೇವೆಗೆ ಸೇರಿದ ದಿನಾಂಕ | ವಾಸ್ತವವಾಗಿ ಮುಂಬಡ್ತಿ ಹೊಂದಿದ ದಿನಾಂಕ | ಅರ್ಹತಾ ದಿನಾಂಕ |
|---|---|---|---|---|---|---|
| 1 | 2 | 3 | 4 | 5 | 6 | 7 |
| ದಿನಾಂಕ: 01-01-2020 ರಿಂದ 09-12-2021ರವರೆಗೆ ಉಳಿಕೆ ಮೂಲ ವೃಂದದ (Residual Parent Cadre)- Non-HK ಬೆರಳಚ್ಚುಗಾರರ (Typist) ವೃಂದದಲ್ಲಿ ಯಾವುದೇ ನೇರ ನೇಮಕಾತಿ ಪ್ರಕ್ರಿಯೆಯು ನಡೆದಿರುವುದಿಲ್ಲ. ಈ ವೃಂದದ ನೇರ ನೇಮಕಾತಿಯನ್ನು ಸರ್ಕಾರದ ಪತ್ರ ಸಂಖ್ಯೆ: ಅಪಜೀ 005 ಅಅಸೇ 2014, ದಿನಾಂಕ:07.07.2014ರಲ್ಲಿ ಹೊರಗುತ್ತಿಗೆ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಆದುದರಿಂದ ಮಾಹಿತಿಯು ಶೂನ್ಯವಾಗಿರುತ್ತದೆ. | | | | | | |

**ದಿನಾಂಕ :** 06-04-2023
**ಸ್ಥಳ :** ಬೆಂಗಳೂರು

Signed by Raj Kishore Singh, Ifs
Date: 06-04-2023 15:39:35

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)